ಇ) ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಹೈದರಾಬಾದ್ ಶಾಖೆಗಳು ಇಲ್ಲದ ಕಡೆ ಉಪ ನೋಂದಣಿ ಕಛೇರಿಯಲ್ಲಿ ನಗದಾಗಿ/ ಡಿ.ಡಿ./ಪೇ ಆರ್ಡರ್/ ಬ್ಯಾಂಕರ್ಸ್ ಚೆಕ್ ಮೂಲಕ ಮುದ್ರಾಂಕ ಶುಲ್ಕ ಪಾವತಿಸಲು ಅವಕಾಶ ಮಾಡಲಾಗಿದೆ.

ಅಂಗನವಾಡಿ ಸಹಾಯಕಿಯರು ಕಾರ್ಯಕರ್ತೆ ಹುದ್ದೆ ಕೋರಿ ಅರ್ಜಿ ಸಲ್ಲಿಸಿರುವುದು

3183 (3673) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಅಂಗನವಾಡಿ ಕಾರ್ಯಕರ್ತೆಯರ ಖಾಲಿ ಹುದ್ದೆ ಕೋರಿ ಸಹಾಯಕಿಯರು ಅರ್ಜಿ ಸಲ್ಲಿಸಿದಾಗ ಅವರಿಗೆ ಆದ್ಯತೆ ನೀಡಬೇಕೆಂದು ಇರುವ ಸುತ್ತೋಲೆಯನ್ನು ಮಾರ್ಪಡಿಸಿ ಸಹಾಯಕಿಯರ ಹಿತದೃಷ್ಟಿಯಿಂದ ಸರ್ಕಾರಿ ಆದೇಶ ಹೊರಡಿಸಿದರೆ ಮಾತ್ರ ಅವರಿಗೆ ಪ್ರಯೋಜನವಾಗಲಿದ್ದು, ಹಲವಾರು ವರ್ಷಗಳಿಂದ ಸಹಾಯಕಿಯಾಗಿ ಸೇವೆ ಸಲ್ಲಿಸಿದವರಿಗೆ ಕಾರ್ಯಕರ್ತೆಯರ ಹುದ್ದೆ ಖಾಲಿ ಯಾದಲ್ಲಿ ಸಂದರ್ಶನ ಜರುಗಿಸದೇ ನೇಮಕಾತಿ ಮಾಡಲು ಸರ್ಕಾರ ಆದೇಶ ಹೊರಡಿಸಲಾಗುವುದೇ?

ಆ) ಹಾಗಾದಲ್ಲಿ, ಯಾವಾಗ ಹೊರಡಿಸಲಾಗುವುದು?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ) ಸರ್ಕಾರದ ಆದೇಶ ಹೊರಡಿಸುವ ಅವಶ್ಯಕತೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಜಾರಿಗೆ ತಂದಿರುವ ಯಶಸ್ವಿನಿ ವಿಮಾ ಯೋಜನೆ

3185 (3677) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ರೈತರಿಗಾಗಿ ಯಶಸ್ವಿನಿ ವಿಮಾ ಯೋಜನೆಯನ್ನು ಜಾರಿಗೆ ತರಲಾಗಿದೆಯೆ

ಆ) ತರಲಾಗಿದ್ದರೆ, ಇಲ್ಲಿಯವರೆಗೂ ಎಷ್ಟು ಜನ ರೈತರು ಈ ಯೋಜನೆಯ ಪ್ರಯೋಜನ ಪಡೆದುಕೊಂಡಿರುತ್ತಾರೆ: ಜಿಲ್ಲಾವಾರು ವಿವರ ನೀಡುವುದು:

ಇ) ಈ ಯೋಜನೆಯ ವಿವರಗಳು ಏನು: ಇದರಿಂದ ರೈತರಿಗೆ ಆಗುವ ಪ್ರಯೋಜನವೇನು?

ಈ) ಈ ಯೋಜನೆಗೆ ರಾಜ್ಯ ಸರ್ಕಾರದಿಂದ ನೀಡುತ್ತಿರುವ ಹಣ ಎಷ್ಟು?

ಉ) ಈ ಯೋಜನೆಯಡಿ ಶಸ್ತ್ರ ಚಿಕಿತ್ಸೆಗೊಳಗಾದ ರೈತರ ಸಂಖ್ಯೆ ಎಷ್ಟು: ಇದಕ್ಕಾಗಿ ಖರ್ಚಾಗಿರುವ ಹಣ ಎಷ್ಟು?

ಶ್ರೀ ಹೆಚ್. ವಿಶ್ವನಾಥ್ (ಸಹಕಾರ ಸಚಿವರು)

ಅ) ಹೌದು

ಆ) 16.01 ಲಕ್ಷ ರೈತರ ಸದಸ್ಯರು ಈ ಯೋಜನೆಯಡಿ ನೋಂದಾಯಿಸಲ್ಪಟ್ಟಿದ್ದಾರೆ. (ಜಿಲ್ಲಾವಾರು ವಿವರಗಳನ್ನು ಲಗತ್ತಿಸಿದೆ.)

ಇ) 1. ಉಚಿತ ಹೊರ ರೋಗಿ ಸಲಹೆ

2. ರಿಯಾಯಿತಿ ದರದಲ್ಲಿ ಪರೀಕ್ಷೆಗಳು